ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಬೆಣ್ಣೆತೋರೆ ನೀರಾವರಿ ಯೋಜನೆ ಬಗ್ಗೆ

ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು) :-

544 (483) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಬೆಣ್ಣೆತೋರೆ ನೀರಾವರಿ ಯೋಜನೆ ಯಾವಾಗ ಪ್ರಾರಂಭಿಸಲಾಗಿದೆ ; ಯೋಜನೆಯ ಅಂದಾಜು ಮೊತ್ತವೆಷ್ಟು ; ಯೋಜನೆಗೆ ಖರ್ಚಾಗಿರುವ ಅನುದಾನ ಹಾಗೂ ಪೂರ್ಣಗೊಳಿಸಲು ಬೇಕಾಗಿರುವ ಅನುದಾನ ಎಷ್ಟು ;

(ಆ) ಈ ಯೋಜನೆ ಪೂರ್ಣಗೊಂಡಾಗ ಎಷ್ಟು ಎಕರೆ ಪ್ರದೇಶಕ್ಕೆ ನೀರಾವಾರಿ ಸೌಲಭ್ಯ ದೊರೆಯಲಿದೆ ; ಪ್ರಸ್ತುತ ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯ ಒದಗಿಸಲಾಗಿದೆ ;

(ಇ) ಈ ಯೋಜನೆಯ ಕಾಲುವೆ ಆಧುನೀಕರಣಕ್ಕೆ ಮಂಜೂರಾಗಿರುವ ಅನುದಾನ ಎಷ್ಟು ; ವೆಚ್ಚವಾಗಿರುವ ಅನುದಾನ ಎಷ್ಟು ;

(ಈ) ಈ ಯೋಜನೆಯನ್ನು ಯಾವ ವರ್ಷ ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ? (ವಿವರ ನೀಡುವುದು)